**Akashvani : Bangalore**
**National Bulletin In Kannada**
**20.07.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.07.2024 / 19.35 hrs**

**<><*<><>*><>**

## ಮುಖ್ಯಾಂಶಗಳು

೧. ಕೇಂದ್ರ ಮುಂಗಡಪತ್ರ ಅಧಿವೇಶನ; ಸುಗಮ ಕಲಾಪಕ್ಕೆ ಸರ್ವಪಕ್ಷಗಳ ಸಭೆ ನಾಳೆ

೨. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಂದ ೨೦೨೫ ರ ಆರ್ಥಿಕ ಸಮೀಕ್ಷೆ ಸೋಮವಾರ ಲೋಕಸಭೆಯಲ್ಲಿ ಮಂಡನೆ

೩. ವಿಶ್ವಪರಂಪರೆಯ ೪೬ನೇ ಅಧಿವೇಶನ ನಾಳೆ ದೆಹಲಿಯಲ್ಲಿ ಆರಂಭ

೪. ಕರ್ನಾಟಕದಲ್ಲಿ ಶಾಲಾ ಮಕ್ಕಳಿಗೆ ಆರು ದಿನಗಳ ಕಾಲ ಮೊಟ್ಟೆ ವಿತರಣೆ; ಮುಖ್ಯಮಂತ್ರಿ ಸಿದ್ದರಾಮಯ್ಯ

೫. ದೇಶದ ಆರ್ಥಿಕ ಬೆಳವಣಿಗೆಗೆ ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯ ಮಹತ್ವ ಕೊಡುಗೆ - ಸಚಿವ ಜೆ.ಪಿ.ನಡ್ಡಾ

**<><*<><>*><>**

ಸಂಸತ್ತಿನ ಬಜೆಟ್ ಅಧಿವೇಶನದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನಾಳೆ ಸರ್ವಪಕ್ಷಗಳ ಸಭೆಯನ್ನು ಕರೆದಿದೆ. ಸಂಸತ್ತಿನ ಉಭಯ ಸದನಗಳ ಸುಗಮ ಕಲಾಪ ನಡೆಸಲು ಸಹಕರಿಸುವಂತೆ, ಎಲ್ಲ ರಾಜಕೀಯ ಪಕ್ಷಗಳ ಮುಖಂಡರಲ್ಲಿ ಮನವಿ ಮಾಡಲಿದ್ದಾರೆ ಎಂದು ವರದಿಯಾಗಿದೆ. ಬರುವ ಸೋಮವಾರದಿಂದ ಆರಂಭವಾಗಲಿರುವ ಬಜೆಟ್ ಅಧಿವೇಶನ ಮುಂದಿನ ತಿಂಗಳ ೧೨ರ ವರೆಗೆ ಮುಂದುವರಿಯಲಿದೆ. ನೂತನ ಕೇಂದ್ರ ಸರ್ಕಾರದ ಮೊದಲ ಮುಂಗಡಪತ್ರವನ್ನು ಹಣಕಾಸು ಖಾತೆಯನ್ನು ಹೊಂದಿರುವ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಮಂಗಳವಾರದಂದು ಮಂಡನೆ ಮಾಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಮೂರನೇ ಅವಧಿಗೆ ಪುನರ್ ಆಯ್ಕೆಯಾದ ನಂತರ ನೂತನ ಸಂಸತ್ ಭವನದಲ್ಲಿ ಮೊದಲ ಮುಂಗಡಪತ್ರ ಇದಾಗಿದೆ.

**<><*<><>*><>**

ಸಂಸತ್ತಿನ ಮುಂಗಾರು ಅಧಿವೇಶನ ಇದೇ ೨೨ರ ಸೋಮವಾರದಿಂದ ಆರಂಭವಾಗಲಿದೆ. ಈ ಅಧಿವೇಶನದಲ್ಲಿ ವಿಪತ್ತು ನಿರ್ವಹಣಾ ಕಾನೂನಿಗೆ ತಿದ್ದುಪಡಿ ತರುವುದು ಸೇರಿದಂತೆ ಒಟ್ಟು ಆರು ಹೊಸ ಮಸೂದೆಗಳನ್ನು ಮಂಡಿಸಲು ಸರ್ಕಾರ ನಿರ್ಧರಿಸಿದೆ. ಹಣಕಾಸು ಮಸೂದೆಯ ಹೊರತಾಗಿ, ನಾಗರಿಕ ವಿಮಾನಯಾನ ಕ್ಷೇತ್ರದಲ್ಲಿ ಸುಲಭವಾಗಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡುವ ನಿಬಂಧನೆಗಳನ್ನು ಒದಗಿಸಲು ೧೯೩೪ರ ಏರ್‌ಕ್ರಾಫ್ಟ್ ಕಾಯ್ದೆಯನ್ನು ಬದಲಿಸಲಿರುವ ಸರ್ಕಾರ, ಭಾರತೀಯ ವಾಯುಯಾನ್ ವಿಧೇಯಕ-೨೦೨೪ನ್ನು ಜಾರಿಗೆ ತರಲಿದೆ. ಸಂಸತ್ತಿನ ಮುಂಗಾರು ಅಧಿವೇಶನ ಇದೇ ೨೨ರಿಂದ ಪ್ರಾರಂಭವಾಗಿ ಆಗಸ್ಟ್ ೧೨ ರವರೆಗೆ ಮುಂದುವರೆಯಲಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇದೇ ೨೩ ರಂದು ಕೇಂದ್ರ ಬಜೆಟ್ ಮಂಡಿಸಲಿದ್ದಾರೆ ಎಂದು ಹೇಳಿದ್ದಾರೆ.

**<><*<><>*><>**

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸೋಮವಾರದಂದು ಲೋಕಸಭೆಯಲ್ಲಿ ಆರ್ಥಿಕ ಸಮೀಕ್ಷಯ ವರದಿಯನ್ನು ಮಂಡನೆ ಮಾಡಲಿದ್ದಾರೆ. ಸಮೀಕ್ಷೆಯಲ್ಲಿ ದೇಶದ ಆರ್ಥಿಕ ಬೆಳವಣಿಗೆ ನೀತಿ-ನಿರೂಪಣೆ ಅನುಷ್ಠಾನ ಹಾಗೂ ಸಾಮಾಜಿಕ, ಆರೋಗ್ಯ ಸೇರಿದಂತೆ ಹಲವು ವಲಯಗಳ ವಿವರಗಳು ಲಭ್ಯವಿರಲಿದೆ ಎಂದು ಮುಖ್ಯ ಆರ್ಥಿಕ ಸಲಹೆಗಾರ ವಿ.ಅನಂತ ನಾಗೇಶ್ವರನ್ ತಿಳಿಸಿದ್ದಾರೆ. ೨೦೨೫ರ ಆರ್ಥಿಕ ವರ್ಷದಲ್ಲಿ ದೇಶದ ಆರ್ಥಿಕ ಬೆಳವಣಿಗೆ ಶೇಕಡ ೭ ರ ಗುರಿ ತಲುಪಲಿದೆ ಎಂದು ಅವರು ವಿಶ್ಲೇಷಿಸಿದ್ದಾರೆ. ಆಯ-ವ್ಯಯದ ಸಂಪೂರ್ಣ ವರದಿ, ಬೆಳವಣಿಗೆ, ಸಮೀಕ್ಷಾ ವಿವರಗಳು ವರದಿಯಲ್ಲಿ ಉಲ್ಲೇಖಿಸಲಾಗುವುದು. ೨೦೨೩ ರಲ್ಲಿ ಐಎಂಎಫ್ ಮಂಡಿಸಿದ್ದ ಮಾಹಿತಿಯಂತೆ ದೇಶದ ಆರ್ಥಿಕ ಬೆಳವಣಿಗೆ ಶೇಕಡ ೭ರ ಆಸುಪಾಸಿನಲ್ಲಿ ಇರಲಿದೆ ಎಂದು ಉಲ್ಲೇಖಿಸಲಾಗಿತ್ತು. ಪ್ರಸಕ್ತ ಆಯ-ವ್ಯಯದ ಮಂಡನೆಗೂ ಮುನ್ನ ಸಮೀಕ್ಷಾ ವರದಿಯಲ್ಲಿ ಜಿಡಿಪಿ ಬೆಳವಣಿಗೆ ೭ ರಿಂದ ೭.೨ ರಷ್ಟು ಹೆಚ್ಚಳವಾಗುವ ನಿರೀಕ್ಷೆಯಿದೆ. ರಿಸರ್ವ್ ಬ್ಯಾಂಕ್‌ನ ಗವರ್ನರ್ ಶಕ್ತಿಕಾಂತ್ ದಾಸ್ ಅವರು, ಮೂರನೇ ತ್ರೈಮಾಸಿಕ ವರದಿಯಲ್ಲಿ ಉಲ್ಲೇಖಿಸಿದಂತೆ ಆರ್ಥಿಕ ಬೆಳವಣಿಗೆ ಸರಾಸರಿ ೭.೨ ರಷ್ಟು ಇರಲಿದೆ ಎಂದು ಹೇಳಿದ್ದಾರೆ.

**<><*<><>*><>**

ಭಾರತ- ನ್ಯೂಜಿಲೆಂಡ್ ನಡುವೆ ದ್ವಿಪಕ್ಷೀಯ ಬಾಂಧವ್ಯ ಬಲವರ್ಧನೆ ಹಾಗೂ ಸಹಕಾರ ವಿನಿಮಯ ಕುರಿತಂತೆ ಉಭಯ ದೇಶಗಳ ಪ್ರಧಾನಮಂತ್ರಿಗಳು ದೂರವಾಣಿ ಮೂಲಕ

ಮಾತುಕತೆ ನಡೆಸಿದರು ಎಂದು ವಿದೇಶಾಂಗ ಸಚಿವಾಲಯ ವರದಿ ಮಾಡಿದೆ. ಪ್ರಧಾನಿ ನರೇಂದ್ರ ಮೋದಿ, ನ್ಯೂಜಿಲೆಂಡ್‌ನ ಪ್ರಧಾನಿ ಕ್ರಿಸ್ಟೋಫರ್ ಲಕ್ಸಾನ್ ಅವರೊಂದಿಗೆ ಸಮಾಲೋಚನೆ ನಡೆಸಿ, ಉಭಯ ದೇಶಗಳ ನಡುವೆ ಆರ್ಥಿಕ ಸಹಕಾರ, ಪಶುಸಂಗೋಪನೆ, ಔಷಧಿ, ಶಿಕ್ಷಣ, ಬಾಹ್ಯಾಕಾಶ ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಸಿದರು. ಎರಡೂ ದೇಶಗಳ ನಡುವೆ ಭದ್ರತೆ ಕುರಿತು ಚರ್ಚೆ ನಡೆಸಲಾಯಿತು. ಉಭಯ ದೇಶಗಳ ನಾಯಕರ ಜೊತೆಗೆ ಉನ್ನತಮಟ್ಟದ ನಿಯೋಗವು ಮಾತುಕತೆ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**<><*<><>*><>**

ವಿಶ್ವ ಪರಂಪರೆ ಸಮಿತಿಯ ೪೬ನೇ ಅಧಿವೇಶನ ನಾಳೆಯಿಂದ ದೆಹಲಿಯ ಭಾರತ್‌ಮಂಟಪದಲ್ಲಿ ಆರಂಭವಾಗಲಿದೆ. ಇದೇ ಮೊದಲ ಬಾರಿಗೆ ಅಧಿವೇಶನವನ್ನು ಆಯೋಜಿಸಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.  ಅಧಿವೇಶನ ಈ ತಿಂಗಳ ಅಂತ್ಯದವರೆಗೂ ನಡೆಯಲಿದ್ದು, ಯುನೆಸ್ಕೋ ಸಂಸ್ಥೆಯ ಮಹಾ ನಿರ್ದೇಶಕಿ ಮೇಡಮ್ ಆಡ್ರೆ ಅಜೌಲೆ, ಯುನೆಸ್ಕೋ ವಿಶ್ವಪರಂಪರೆಯ ಸಚಿವಾಲಯದ ಹಿರಿಯ ಅಧಿಕಾರಿಗಳು, ವಿವಿಧ ದೇಶಗಳ ಸಾಂಸ್ಕೃತಿಕ ಸಚಿವರು, ರಾಯಭಾರಿಗಳು ಸೇರಿದಂತೆ ಉನ್ನತ ಮಟ್ಟದ ಪ್ರತಿನಿಧಿಗಳು ಅಧಿವೇಶನದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಸಂಸ್ಕೃತಿ ಸಚಿವಾಲಯ ತಿಳಿಸಿದೆ.  ಈ ಕುರಿತು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಮಾಹಿತಿ ನೀಡಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮೂರನೇ ಅವಧಿಯ ಸರ್ಕಾರದಲ್ಲಿ ಇಂತಹ ಒಂದು ದೊಡ್ಡ ಅಧಿವೇಶನವನ್ನು ಭಾರತ ಆಯೋಜಿಸಿದೆ ಎಂದರು. ದೇಶದ ಸಾಂಸ್ಕೃತಿಕ ವೈಭವ ಮತ್ತು ಪರಂಪರೆಯನ್ನು ಅತ್ಯಂತ ಎತ್ತರಕ್ಕೆ ಕೊಂಡೊಯ್ಯುವ ಉದ್ದೇಶದ ಜತೆಗೆ ವಿಶ್ವದ ವೈವಿಧ್ಯತೆ ಮತ್ತು ವಿಶಿಷ್ಟತೆಯನ್ನು ಜನರಿಗೆ ಪರಿಚಯಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಕರ್ನಾಟಕದಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಉತ್ತಮ ಶಿಕ್ಷಣಕ್ಕೆ ಗುಣಮಟ್ಟದ ಆಹಾರ ನೀಡುವುದು ಅತ್ಯಂತ ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸರ್ಕಾರ ಹಾಗೂ ಅಜೀಂಪ್ರೇಮ್ ಜಿ ಫೌಂಡೇಷನ್ ಸಹಭಾಗಿತ್ವದಲ್ಲಿ ಸರ್ಕಾರಿ, ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ವಾರದಲ್ಲಿ ಉಚಿತವಾಗಿ ೬ ದಿನಗಳ ಕಾಲ ೧ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಪೂರಕ ಪೌಷ್ಠಿಕ ಆಹಾರ ನೀಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲಾ ಮಕ್ಕಳಿಗೆ ಅಜೀಂ ಪ್ರೇಮ್ ಜಿ ಫೌಂಡೇಷನ್‌ನಿಂದ ವಾರದಲ್ಲಿ

ನಾಲ್ಕು ದಿನವೂ ಮೊಟ್ಟೆ ನೀಡಲು ಮತ್ತು ಪೂರಕ ಪೌಷ್ಠಿಕ ಆಹಾರ ಒದಗಿಸುವ ಪುಣ್ಯದ ಕಾರ್ಯಕ್ಕೆ ಸರ್ಕಾರದ ಜೊತೆಗೆ ಕೈಜೋಡಿಸಿದ್ದಾರೆ. ವೈಜ್ಞಾನಿಕವಾಗಿ, ವೈಚಾರಿಕವಾಗಿ ವಿದ್ಯಾರ್ಥಿಗಳು ವಿಕಾಸ ಹೊಂದಿದಾಗ ಮಾತ್ರ ಸಮಾಜಮುಖಿಯಾಗಲು ಸಾಧ್ಯ ಎಂದು ಹೇಳಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ ವ್ಯಾಪಕ ಮಳೆಯಿಂದಾಗಿ ಉಂಟಾಗಿರುವ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

**<><*<><>*><>**

ಗುಜರಾತ್, ಗೋವಾ, ಮಧ್ಯಪ್ರದೇಶ, ಮಹಾರಾಷ್ಟ್ರ ಹಾಗೂ ದಕ್ಷಿಣ ಛತ್ತೀಸ್‌ಗಢದಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಒಡಿಶಾ, ಕೇಂದ್ರ ಆಂಧ್ರಪದೇಶ ಮತ್ತು ತೆಲಂಗಾಣ ಭಾಗಗಳಲ್ಲಿ ಭಾರೀ ಮಳೆಯಾಗಲಿದೆ. ಅಗತ್ಯ ಮುನ್ನಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ರಾಜ್ಯ ಸರ್ಕಾರಗಳಿಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ನಾಲ್ಕು ದಿನಗಳ ಕಾಲ ಉತ್ತರ ಆಂಧ್ರಪ್ರದೇಶ, ಒಡಿಶಾ, ಪಶ್ಚಿಮಬಂಗಾಳ ಮತ್ತು ನೆರೆಯ ದೇಶವಾದ ಬಾಂಗ್ಲಾದ ಕರಾವಳಿಯಲ್ಲಿ ಭಾರೀ ಮಳೆ ಬೀಳುವ ಸಂಭವವಿದೆ ಎಂದು ಹವಾಮಾನ ಇಲಾಖೆ ವರದಿ ಮಾಡಿದೆ.

**<><*<><>*><>**

ಭಾರತದ ಐದು ಟ್ರಿಲಿಯನ್ ಡಾಲರ್‌ನ ಆರ್ಥಿಕತೆಗೆ ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯ, ಅಗತ್ಯ ಬೆಂಬಲವನ್ನು ನೀಡುತ್ತಿದೆ ಎಂದು ಕೇಂದ್ರ ಸಚಿವ ಜೆ.ಪಿ.ನಡ್ಡಾ ಹೇಳಿದ್ದಾರೆ. ಇಂಡಿಯಾ ಕೆಮ್-೨೦೨೪ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯದಿಂದ ದೇಶದ ಆರ್ಥಿಕ ಬೆಳವಣಿಗೆಗೆ ಮಹತ್ವ ಕೊಡುಗೆ ನೀಡುತ್ತಾ ಬಂದಿದೆ ಎಂದರು. ಔಷಧ ವಲಯದಲ್ಲಿ ದೇಶ ಸ್ವಾವಲಂಭಿಯ ಜೊತೆಗೆ ಸಾರ್ವಜನಿಕರ ಆರೋಗ್ಯದ ಮೇಲೆ ಯಾವುದೇ ರೀತಿಯ ದುಶ್ಪರಿಣಾಮ ಬೀರದಂತಹ ಗುಣಮಟ್ಟದ ಔಷಧಗಳನ್ನು ತಯಾರು ಮಾಡಿ ವಿದೇಶಗಳಿಗೆ ರಫ್ತು ಮಾಡುತ್ತಿದೆ. ರಸಗೊಬ್ಬರ ವಿಚಾರದಲ್ಲಿ ಸ್ವಾವಲಂಭಿ ದೇಶವಾಗಿ ಭಾರತ ಹೊರಹೊಮ್ಮಲಿದೆ. ಈಗಾಗಲೇ ಹಲವು ಪ್ರಯೋಗಗಳನ್ನು ಮಾಡುವ ಮೂಲಕ ದೇಶೀಯ ಉತ್ಪಾದನೆಗೆ ಆದ್ಯತೆ ನೀಡಿರುವುದರಿಂದ ಅಪಾರ ಪ್ರಮಾಣದ ವಿದೇಶಿ ವಿನಿಮಯವನ್ನು ಉಳಿಸಿದೆ ಎಂದು ಅವರು ಪ್ರತಿಪಾದಿಸಿದರು. ಬರುವ ಅಕ್ಟೋಬರ್‌ನಲ್ಲಿ ಏಷ್ಯಾ - ಪೆಸಿಫಿಕ್ ವಲಯದ ರಾಷ್ಟ್ರೀಯ ಸಮಾವೇಶ ಮುಂಬೈನಲ್ಲಿ ನಡೆಯಲಿದೆ ಎಂದು ಕೇಂದ್ರ ಸಚಿವ ಜೆ.ಪಿ.ನಡ್ಡಾ ತಿಳಿಸಿದ್ದಾರೆ.

<><*<><>*><>

ಏಷ್ಯಾ ಕಪ್ ಟಿ-೨೦ ಮಹಿಳಾ ಕ್ರಿಕೆಟ್ ಟೂರ್ನಿಯಲ್ಲಿ ಶ್ರೀಲಂಕಾದ ದಾಂಬೂಲ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆದ ಪಂದ್ಯದಲ್ಲಿ ಮಲೇಷಿಯಾ ವಿರುದ್ಧ ಥೈಲ್ಯಾಂಡ್ ೨೨ ರನ್‌ಗಳ ಗೆಲುವು ಸಾಧಿಸಿದೆ. ಮೊದಲ ಬ್ಯಾಟ್ ಮಾಡಿದ ಥೈಲ್ಯಾಂಡ್ ತಂಡ, ನಿಗಿದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೩೩ ರನ್‌ಗಳಿಸಿತ್ತು. ೧೩೪ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಮಲೇಷಿಯಾ, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೧೧ ರನ್ ಗಳಿಸಲಷ್ಟೇ ಶಕ್ತವಾಯಿತು.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ **<>*><>**